**ಕರ್ನಾಟಕ ಸರ್ಕಾರ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-560 052.

# ಪ್ರಕಟಣೆ

ಸಂಖ್ಯೆ: ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24 ದಿನಾಂಕ:20.12.2023.

**2023-24ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿ ಆಹ್ವಾನ.**

2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:30.01.2023 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ ಪ್ರಾರಂಭಿಸಿರಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-I, II (ಎ), III(ಎ) ಹಾಗೂ III(ಬಿ) ಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2023-24ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ಧ ವಿಶ್ವ ವಿದ್ಯಾಲಯಗಳಲ್ಲಿ/ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್-ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:10.01.2024 ರ ಸಂಜೆ 5.30 ಗಂಟೆ.** ಹೆಚ್ಚಿನ ವಿವರಗಳು ಇಲಾಖಾ **ವೆಬ್ ಸೈಟ್ https://bcwd.karnataka.gov.in** ನಲ್ಲಿ ಲಭ್ಯವಿದ್ದು, ಅಭ್ಯರ್ಥಿಗಳು ಎಲ್ಲಾ ಮಾಹಿತಿಯನ್ನು ಓದಿ, ತಿಳಿದುಕೊಂಡು ನಂತರ ಅರ್ಜಿ ಸಲ್ಲಿಸುವುದು.

**ಕೆಲವು ಮುಖ್ಯ ಅರ್ಹತೆ ಮತ್ತು ಸೂಚನೆಗಳು:**

ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

ಆ) ಹಿಂದುಳಿದ ವರ್ಗಗಳ ಪ್ರವರ್ಗ-I, II(ಎ), III(ಎ) ಅಥವಾ III(ಬಿ) ಸೇರಿರಬೇಕು.

ಇ) ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ -

| ಕ್ರ.ಸಂ. | ಪ್ರವರ್ಗ | ಆದಾಯ ಮಿತಿ |
|---|---|---|
| 1 | I | ರೂ.4.50 ಲಕ್ಷ |
| 2 | II(ಎ), III(ಎ) ಹಾಗೂ III(ಬಿ) | ರೂ.3.50 ಲಕ್ಷ |

ಈ) ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು.

ಉ) ಅಭ್ಯರ್ಥಿಗಳು ಪೂರ್ಣಾವಧಿ ಪಿಎಚ್.ಡಿ ಅಧ್ಯಯನಕ್ಕಾಗಿ ಮಾಡಿಸುವ ನೋಂದಣಿ ದಿನಾಂಕವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸುವ ಕೊನೆಯ ದಿನಾಂಕಕ್ಕೆ ಹಿಂದಿನ 2 ವರ್ಷದೊಳಗಿದ್ದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.

ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 8050770004 (ಕಛೇರಿ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 05.30 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು

No. NITK/Academic/2023-24/E4 Date: 05.01.2024

To,

The Professor Incharge kindly arrange to upload in the Institute Website for The information of the respective students.

Asst. Registrar (Academic)

Assistant Registrar (Academic)
National Institute of Technology
Karnataka, Surathkal
P.O. Srinivasnagar, Mangalore-575 025